ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
Bangalore Development Authority
GST : 29AAALV0060D1ZS

000111

ಸಂಖ್ಯೆ: ಬೆಂಅಪ್ರಾ/ನಯೋಸ/DLP-16/2021-22/ 1500 /2022-23.
No: C.No. 162825

ದಿನಾಂಕ:
Date: 26/9/2022

## ಕಾರ್ಯಾದೇಶ

ವಿಷಯ:- ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್ ರವರ ಪರವಾಗಿ ಅನುಮೋದನೆ ನೀಡುವ ಕುರಿತು.

ಉಲ್ಲೇಖ
1. ಅರ್ಜಿದಾರರ ಮನವಿ ದಿನಾಂಕ 04.02.2022.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 2.4.5 / 2022, ದಿನಾಂಕ 22.06.2022.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-16/2021-22/968/2022-23, ದಿನಾಂಕ 29.07.2022.
4. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯಲ್ಲಿ ಶುಲ್ಕ ಪಾವತಿಸಿರುವ ಚಲನ್ ಸಂಖ್ಯೆ GN22081509, ದಿನಾಂಕ 03.08.2022.
5. ಈ ಕಛೇರಿಯ ಅ.ಟಿ. ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-16/2021-22/1198/2022-23, ದಿನಾಂಕ 19.08.2022.
6. ಅಧಿಕ ಜಿಲ್ಲಾ ನೊಂದಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರ ಕಛೇರಿಯ 1ನೇ ಪುಸ್ತಕದ ದಸ್ತಾವೇಜು ನಂಬರ್ BDA-1-01936-2022-23 ಆಗಿ CD ನಂ. BDAD1146, ದಿನಾಂಕ 26.08.2022 ರಂತೆ ನೊಂದಾಯಿಸಿರುವ ಪರಿತ್ಯಾಜನ ಪತ್ರ.

ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ನೀಡುವಂತೆ ಉಲ್ಲೇಖ [1] ರಲ್ಲಿ ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ವಿಷಯವನ್ನು ಉಲ್ಲೇಖ [2] ರಂತೆ ದಿನಾಂಕ 22.06.2022 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯಲ್ಲಿ ವಿಷಯ ಸಂಖ್ಯೆ 2.4.5 / 2022 ರಲ್ಲಿ ಮಂಡಿಸಿ ಚರ್ಚಿಸಲಾಗಿರುತ್ತದೆ ಚರ್ಚೆಯ ನಂತರ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯು ಸರ್ಕಾರದಿಂದ ಅನುಮೋದನೆಗೊಂಡ RMP-2015 ರ ವಲಯ ನಿಯಮಾವಳಿ ಅಧ್ಯಾಯ 7.1 ರಲ್ಲಿನ ಅಂಶಗಳಿಗೆ ಅನುಗುಣವಾಗಿರುವುದನ್ನು ಸಭೆಯು ಗಮನಿಸಿ, ಬೆಂಗಳೂರು ನಗರ ಜಿಲ್ಲೆ,

ವಿಷಯ:- ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್ ರವರ ಪರವಾಗಿ ಅನುಮೋದನೆ ನೀಡುವ ಕುರಿತು.

---

ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶಕ್ಕೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಕೆಳಕಂಡ ಷರತ್ತುಗಳಿಗೊಳಪಡಿಸಿ, ಅನುಮೋದಿಸಲು ತೀರ್ಮಾನಿಸಿ, ಅಗತ್ಯ ಕ್ರಮ ಕೈಗೊಳ್ಳಲು ಆಯುಕ್ತರಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (3) ರ ಪತ್ರದಂತೆ ವಿವಿಧ ಶುಲ್ಕಗಳ ಬಾಬ್ತು ₹.41,94,450/- [ರೂ. ನಲವತ್ತೊಂದು ಲಕ್ಷದ ತೊಂಭತ್ತನಾಲ್ಕು ಸಾವಿರದ ನಾಲ್ಕನೂರ ಐವತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು. ಉಲ್ಲೇಖ (4) ರಲ್ಲಿ ಅರ್ಜಿದಾರರು ದಿನಾಂಕ 03.08.2022 ರಂದು ₹. 41,94,450/- [ರೂ. ನಲವತ್ತೊಂದು ಲಕ್ಷದ ತೊಂಭತ್ತನಾಲ್ಕು ಸಾವಿರದ ನಾಲ್ಕನೂರ ಐವತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. GN22081509 ರ ಮೂಲಕ ಪಾವತಿಸಿರುತ್ತಾರೆ.

ಅರ್ಜಿದಾರರು ಪಾವತಿಸಿರುವ ಮೊತ್ತವು ಪ್ರಾಧಿಕಾರದ ಲೆಕ್ಕಕ್ಕೆ ಜಮೆಯಾಗಿರುವ ಬಗ್ಗೆ ಪ್ರಾಧಿಕಾರದ ಆರ್ಥಿಕ ವಿಭಾಗದಿಂದ ದಿನಾಂಕ 8.08.2022 ರಂದು ಕಡತದಲ್ಲಿ ದೃಢೀಕರಿಸಿರುತ್ತಾರೆ.

ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಪ್ರಸ್ತಾಪಿಸಿರುವ ಉದ್ಯಾನವನ ಮತ್ತು ಬಯಲು ಜಾಗ ಹಾಗೂ ರಸ್ತೆ ವಿಸ್ತರಣೆ ಪ್ರದೇಶಗಳನ್ನು ಪ್ರಾಧಿಕಾರಕ್ಕೆ ಪರಿತ್ಯಜನಾ ಪತ್ರದ ಮೂಲಕ ಪುಕ್ಕಟೆಯಾಗಿ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು (ಉತ್ತರ) ರವರಿಗೆ ಉಲ್ಲೇಖ [5] ರಂತೆ ತಿಳಿಸಲಾಗಿತ್ತು. ಅರ್ಜಿದಾರರು ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ/ ಬಯಲುಜಾಗ ಮತ್ತು ರಸ್ತೆ ವಿಸ್ತರಣೆ ಪ್ರದೇಶಗಳನ್ನು ಉಲ್ಲೇಖ (6) ರಲ್ಲಿನ ಕಾರ್ಯಪಾಲಕ ಅಭಿಯಂತರ ವಿಭಾಗದಿಂದ ವರದಿಯಂತೆ ನೊಂದಾಯಿತ ಪರಿತ್ಯಾಜನಾ ಪತ್ರದಂತೆ ದಿನಾಂಕ 26.08.2022 ರಂದು ಪ್ರಾಧಿಕಾರಕ್ಕೆ ಹಸ್ತಾಂತರಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ KTCP ಕಾಯ್ದೆ 1961 ರ ಕಲಂ [17] ರನ್ವಯ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1 | ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವುದು. |
| 2 | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |
| 3 | ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 4 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶವು ಸೇರಿದಂತೆ ಅಭಿವೃದ್ಧಿ ಯೋಜನಾ ಪ್ರದೇಶದಲ್ಲಿ 240.00 ಚ.ಮೀ FAR ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು . |

ವಿಷಯ:- ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್ ರವರ ಪರವಾಗಿ ಅನುಮೋದನೆ ನೀಡುವ ಕುರಿತು.

| | |
|---|---|
| 5 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ಹಾಗೂ Buffer ಪ್ರದೇಶದಲ್ಲಿ ವಿವಿಧ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ಧೇಶಗಳಿಗೆ ಬದಲಾಯಿಸಬಾರದು. |
| 6 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 7 | ಸ್ವಾಭಾವಿಕವಾಗಿ ಇಳಿಜಾರು ಕಡೆ ಹೋಗುವ ಮಳೆ ನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡುವುದು. |
| 8 | ವಿವರವಾದ ಕಟ್ಟಡ ನಕ್ಷೆಗಳನ್ನು ಅನುಮೋದಿಸುವ ಸಕ್ಷಮ ಪ್ರಾಧಿಕಾರವು Structural Stability ಬಗ್ಗೆ ಹಾಗೂ ವಿವಿಧ ಇಲಾಖೆಗಳು ನೀಡುವ NOC ಗಳಲ್ಲಿನ ಷರತ್ತುಗಳೊಂದಿಗೆ ಪರಿಶೀಲಿಸಿಕೊಳ್ಳತಕ್ಕದ್ದು. |
| 9 | ಕಟ್ಟಡ ನಕ್ಷೆ ಅನುಮೋದನೆ ಸಮಯದಲ್ಲಿ ತಳಮಹಡಿ ಅಗತ್ಯತೆ ಬಗ್ಗೆ Water Table ನ ವರದಿ ಪಡೆದು ಅದಕ್ಕನುಗುಣವಾಗಿ ಕ್ರಮ ಜರುಗಿಸುವುದು. |
| 10 | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ, ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಕೆಟಿಸಿಪಿ ಕಾಯ್ದೆ ಕಲಂ 76 (O) ರಡಿಯಲ್ಲಿ ಅಧಿಕಾರವನ್ನು ಪ್ರಾಧಿಕಾರದ ಆಯುಕ್ತರು ಅಧಿಕಾರವುಳ್ಳರಾಗಿದ್ದು, ಅದರಂತೆ ಕ್ರಮ ಜರುಗಿಸಲಾಗುವುದು. |
| 11 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿನಕ್ಷೆಯಲ್ಲಿ Arrangement of Blocks ಗಳನ್ನು ವಲಯ ನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡ ನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸಿರುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ವಿವಿಧ ಇಲಾಖೆಗಳಿಂದ NOC ಗಳನ್ನು ಮತ್ತು ಇನ್ನಿತರೇ ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 12 | ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿದ್ದು ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ. |

ವಿಷಯ:- ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್ ರವರ ಪರವಾಗಿ ಅನುಮೋದನೆ ನೀಡುವ ಕುರಿತು.

---

| | |
|---|---|
| 13 | ಅಭಿವೃದ್ಧಿ ನಕ್ಷೆಯಲ್ಲಿ Sewage Treatment Plant, Solid Waste Management, RWH, Transformer Yard ಗೆ ಅಗತ್ಯ ಜಾಗಗಳನ್ನು ಗುರುತಿಸಿ Dual Piping System ಅನ್ನು ಅಳವಡಿಸಿ KSPCB, BWSSB, BESCOM ರವರಿಂದ ಅಗತ್ಯ NOC ಗಳನ್ನು ಪಡೆದು ಅವರ ನಿರ್ದೇಶನದಂತೆ ಅಳವಡಿಸುವುದು. |
| 14 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂದಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ಅಭಿವೃದ್ಧಿ ನಕ್ಷೆಯಲ್ಲಿ ಗುರುತಿಸಿ ಕಟ್ಟಡ ನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 15 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಭೂಮಿಯ ಒಳಗಡೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 16 | ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿಗಾಗಿ Sewage Treatment Plant ಸಹಿತ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. |
| 17 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 18 | ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ (EWS) ಮತ್ತು ಕಡಿಮೆ ವರ್ಗದವರಿಗಾಗಿ (LIG) ವಸತಿ ಅಭಿವೃದ್ಧಿ ಯೋಜನೆಯಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ಘಟಕಗಳ ಶೇ.10 ರಷ್ಟು ವಸತಿ ಘಟಕಗಳನ್ನು (EWS) ಆರ್ಥಿಕ ದುರ್ಬಲ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸಿ, ಅದೇ ಉದ್ದೇಶಕ್ಕೆ ಬಳಸತಕ್ಕದ್ದು. |
| 19 | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 20 | ಪ್ರಶ್ನಿತ ಪ್ರದೇಶದ ಉದ್ದೇಶಿತ ಬೆಳವಣಿಗೆಗಳಿಂದ ಯಾವುದೇ ತ್ಯಾಜ್ಯ ನೀರನ್ನು ಸಂಸ್ಕರಿಸದೇ ಹೊರಬಿಡಬಾರದು. |
| 21 | ಪ್ರಶ್ನಿತ ಪ್ರದೇಶದಲ್ಲಿ ನೈಸರ್ಗಿಕವಾಗಿ ಅಥವಾ R.S ನಕ್ಷೆ ಅಥವಾ RMP ರಂತೆ ಹಾದು ಹೋಗುವ ಹಳ್ಳ ಮತ್ತು ಕೊಳ್ಳಗಳನ್ನು ಹಾಗೂ ಬಂಡಿದಾರಿ, ಕಾಲುದಾರಿಗಳನ್ನು ಒತ್ತುವರಿ ಮಾಡಬಾರದು. ನೀರಿನ ಹರಿವಿಕೆಗೆ ಅಡಚಣೆ ಉಂಟು ಮಾಡದೇ ಸರಗವಾಗಿ ನೀರು ಹರಿದು ಹೋಗುವಂತೆ ಅಭಿವೃದ್ಧಿಪಡಿಸತಕ್ಕದ್ದು. |
| 22 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ವಿಷಯ:- ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್ ರವರ ಪರವಾಗಿ ಅನುಮೋದನೆ ನೀಡುವ ಕುರಿತು.

---

ಮೇಲ್ಕಂಡ ಷರತ್ತುಗಳೊಂದಿಗೆ ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಯಲಹಂಕ ಹೋಬಳಿ, ತಿರುಮೇನಹಳ್ಳಿ ಗ್ರಾಮದ ಸರ್ವೆ ನಂ. 16 ರಲ್ಲಿನ ಭೂಪರಿವರ್ತನೆಯಾಗಿರುವ 06 ಎಕರೆ 32 ಗುಂಟೆ ಪೈಕಿ ಹಾಲಿ ಅನುಭವದಲ್ಲಿರುವ 06 ಎಕರೆ 03 ಗುಂಟೆ [24584.45 ಚ.ಮೀ.] ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ KTCP ಕಾಯ್ದೆ 1961 ರ ಕಲಂ [17] ರನ್ವಯ ಅನುಮೋದನೆ ನೀಡಲಾಗಿದೆ.

ಆಯುಕ್ತರು,
ಬೆಂಅಪ್ರಾ, ಬೆಂಗಳೂರು.

ಇವರಿಗೆ,

ಮೆ: ಗೋಯಲ್ ಹರಿಯಾಣ ಎಂಟರ್ ಪ್ರೈಸಸ್,
ಕಛೇರಿ ನಂ. 206, ಚಾರ್ಟನ್ ಸೆಂಟರ್,
ಎಂ.ಜಿ. ರೋಡ್,
ಬೆಂಗಳೂರು – 560 001.